# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

## ದಾಸರಹಳ್ಳಿ ವಲಯ, ಹೆಗ್ಗನಹಳ್ಳಿ ಉಪವಿಭಾಗ

### ವಾರ್ಡ್ ನಂ.71 : ಹೆಗ್ಗನಹಳ್ಳಿ

**ದಿನಾಂಕ: 06.02.2021 ರಂದು ಬೆಳಿಗ್ಗೆ 11.00 ಗಂಟೆಗೆ ಶ್ರೀ ಬಿ.ಆರ್ ರವಿಕುಮಾರ್ ನೋಡಲ್ ಅಧಿಕಾರಿ, ವಾರ್ಡ್ 71 ರವರ ಅಧ್ಯಕ್ಷತೆಯಲ್ಲಿ ಸಹಾಯಕ ಕಾರ್ಯಪಾಲಕ ಅಭಿಯಂತರರು, ಹೆಗ್ಗನಹಳ್ಳಿ ಉಪವಿಭಾಗ ಕಛೇರಿಯಲ್ಲಿ ನಡೆದ ಸಭೆಯ ನಡಾವಳಿಗಳು:**

ಸಭೆಯಲ್ಲಿ ಹಾಜರಿದ್ದವರು:

| ಕ್ರ.ಸಂ | ಹೆಸರು | ಪದನಾಮ |
|---|---|---|
| 1 | ಶ್ರೀ ಬಿ.ಆರ್ ರವಿಕುಮಾರ್ | ನೋಡಲ್ ಅಧಿಕಾರಿ–ವಾರ್ಡ್ ನಂ.71, ಸಹಾಯಕ ನಿರ್ದೇಶಕರು (ಪಶುಪಾಲನೆ) |
| 2 | ಶ್ರೀ ಮಂಜುನಾಥ್ ಡಿ ಎಸ್ | ಸಹಾಯಕ ಅಭಿಯಂತರರು, ಕಾರ್ಯದರ್ಶಿ ಹಾಗೂ ಸಂಚಾಲಕರು–ವಾರ್ಡ್ 71 |
| 3 | ಪ್ರಕಾಶ್ ಹೆಚ್.ಆರ್ | ಸ್ಥಳೀಯ ನಾಗರೀಕರ ಕಲ್ಯಾಣ ಸಂಘ |
| 4 | ಜಿ.ಎಸ್.ಗಿರೀಶ್ ಗೌಡ್ರು | ಸ್ಥಳೀಯ ನಾಗರೀಕರ ಕಲ್ಯಾಣ ಸಂಘ |
| 5 | ವೆಂಕಟರಾಜು | ಸ್ಥಳೀಯ ನಾಗರೀಕರ ಕಲ್ಯಾಣ ಸಂಘ (ಹೆಗ್ಗನಹಳ್ಳಿ ನಾಗರೀಕರ ಹಿತ ರಕ್ಷಣಾ ವೇದಿಕೆ) |
| 6 | ಸ್ವಾಮಿ | ಸ್ಥಳೀಯ ನಾಗರೀಕರ ಕಲ್ಯಾಣ ಸಂಘ |
| 7 | ಬಿ.ಎನ್.ರಂಗನಾಥ್ | ಸ್ಥಳೀಯ ನಾಗರೀಕರ ಕಲ್ಯಾಣ ಸಂಘ |
| 8 | ಸುರೇಶ್ ಎಂ | ಕಿರಿಯ ಆರೋಗ್ಯ ಪರಿವೀಕ್ಷಕರು |
| 9 | ಮಂಜುನಾಥ್ | ಸ್ಥಳೀಯ ನಾಗರೀಕರ ಕಲ್ಯಾಣ ಸಂಘ |
| 10 | ಪ್ರಶಾಂತ್ | ಜೆ.ಎಲ್.ಎಂ |
| 11 | ಡಾ॥ ಎಂ.ಎಲ್.ರವಿಕುಮಾರ್ | ಎಂ.ಓ.ಎಚ್ |

:ನಡಾವಳಿಯ ವರದಿ:

➢ ಕಾರ್ಯದರ್ಶಿಗಳಾದ ಶ್ರೀ ಡಿ.ಎಸ್.ಮಂಜುನಾಥ್ ಮಾತನಾಡುತ್ತಾ ಸಭೆಗೆ ಹಾಜರಾದ ನೋಡಲ್ ಅಧಿಕಾರಿ ಹಾಗೂ ಪಾಲಿಕೆಯ ಅಧಿಕಾರಿಗಳು/ನೌಕರರಿಗೆ ಸ್ವಾಗತ ಕೋರಿದರು.

*****

- <u>ಚರಂಡಿಗಳಲ್ಲಿ ಹೂಳು ತುಂಬಿರುವ ಬಗ್ಗೆ:</u>
  - ಶ್ರೀ ಲೋಕೇಶ್ ಗೌಡ ರವರು ಮಾತನಾಡಿ, ಲಕ್ಷ್ಮಣ ನಗರದ ಈಚಲಮರದ ರಸ್ತೆಯಲ್ಲಿ ಚರಂಡಿಗಳಲ್ಲಿ ಹೂಳು ತುಂಬಿದ್ದು, ತೆಗೆಸಿಕೊಡುವಂತೆ ಕೋರಿದರು.
  - ಶ್ರೀ ಗಿರೀಶ್ ಗೌಡರವರು ಮಾತನಾಡಿ, ಸಂಜೀವಿನಿ ನಗರದ ರಸ್ತೆಗಳಲ್ಲಿ ರಸ್ತೆ ಬದಿ ಮಣ್ಣನ್ನು ವಿಲೇವಾರಿ ಮಾಡಿರುವುದಿಲ್ಲ, ಈ ಬಗ್ಗೆ ಕ್ರಮ ವಹಿಸಲು ಕೋರಿದರು.

- ಈ ಬಗ್ಗೆ ಶ್ರೀ ಬಿ.ಆರ್ ರವಿಕುಮಾರ್, ನೋಡಲ್ ಅಧಿಕಾರಿ ವಾರ್ಡ್ 71ರವರು ಸಭೆಯಲ್ಲಿ ಹಾಜರಿದ್ದ ಸಹಾಯಕ ಅಭಿಯಂತರರಿಗೆ ಶೀಘ್ರದಲ್ಲಿ ಕ್ರಮವಹಿಸುವಂತೆ ಸೂಚಿಸಿದರು.

- <u>ರಸ್ತೆ ಗುಂಡಿಗಳ ನಿರ್ವಹಣೆ ಬಗ್ಗೆ</u>
  - ಮಂಜುನಾಥ್ ಡಿ.ಎಸ್. ಸಹಾಯಕ ಅಭಿಯಂತರರು, ವಾರ್ಡ್ ನಂ.71 ರವರು ಮಾತನಾಡಿ ವಾರ್ಡ್ ವ್ಯಾಪ್ತಿಯಲ್ಲಿ ಹಿಂದಿನ ಸಭೆಯಲ್ಲಿ ತಿಳಿಸಿರುವಂತೆ ಲಕ್ಷ್ಮಣ ನಗರದ 1ನೇ ಮುಖ್ಯರಸ್ತೆ, 4ನೇ ಅಡ್ಡರಸ್ತೆ, 2ನೇ ಅಡ್ಡರಸ್ತೆ ಹಾಗೂ 5ನೇ ಅಡ್ಡರಸ್ತೆಗಳಲ್ಲಿ ಬಿದ್ದಿರುವ ರಸ್ತೆಗುಂಡಿಗಳಿಗೆ ಡಾಂಬರು ಹಾಕಲಾಗಿದೆ. ಈಚಲ ಮರದ ರಸ್ತೆ, ನಿಸರ್ಗ ಶಾಲೆ ರಸ್ತೆ, ಹಾಗೂ ಓಂ ಸಂಜೀವಿನಿ ನಗರ 3ನೇ ಹಂತದಲ್ಲಿ ಓಂ ಶಕ್ತಿ ದೇವಸ್ಥಾನ ರಸ್ತೆ, ಗಣೇಶ ದೇವಸ್ಥಾನದ ರಸ್ತೆಗಳಲ್ಲಿ ಬಿದ್ದಿರುವ ರಸ್ತೆ ಗುಂಡಿಗಳನ್ನು ಪಟ್ಟಿ ಮಾಡಿಕೊಂಡಿದ್ದು ಇನ್ನು 2-3 ದಿನಗಳಲ್ಲಿ ಡಾಂಬರು ಹಾಕಲಾಗುವುದು ಎಂದು ತಿಳಿಸಿದರು.

- ಇನ್ನಿತರ ಸಮಸ್ಯೆಗಳ ಬಗ್ಗೆ:
  - ವೆಂಕಟರಾಜು ರವರು ಮಾತನಾಡಿ ಹೊಯ್ಸಳನಗರದಲ್ಲಿ ಬೀದಿದೀಪ ಉರಿಯುತ್ತಿಲ್ಲ. ಇದ್ದರಿಂದ ನಾಗರೀಕರಿಗೆ ಓಡಾಡಲು ತೊಂದರೆಯಾಗಿರುತ್ತದೆ ಈ ಬಗ್ಗೆ ಕ್ರಮವಹಿಸಲು ಕೋರಿದರು.
    - ಈ ಬಗ್ಗೆ ನೋಡಲ್ ಅಧಿಕಾರಿ ರವರು ಪ್ರತಿಕ್ರಿಯಿಸಿ ಸಂಬಂಧಪಟ್ಟವರಿಗೆ ದುರಸ್ಥಿಪಡಿಸಲು ಸೂಚಿಸಲಾಗುವುದೆಂದು ತಿಳಿಸಿದರು.
  - ವಿ ಲೋಕೇಶ್ ಗೌಡ ರವರು ಮಾತನಾಡುತ್ತಾ, ವಾರ್ಡ್ ವ್ಯಾಪ್ತಿಯಲ್ಲಿ ಸೊಳ್ಳೆಗಳ ಕಾಟ ಜಾಸ್ತಿ ಇರುವುದರಿಂದ ವಾರ್ಡ್ ವ್ಯಾಪ್ತಿಯಲ್ಲಿ ಫಾಗಿಂಗ್ ಮಾಡಲು ಸಂಬಂಧ ಪಟ್ಟ ಗುತ್ತಿಗೆದಾರರನ್ನು ಸಭೆಗೆ ಕರೆಸಲು ಕೋರಿದರು
    - ಈ ಬಗ್ಗೆ ನೋಡಲ್ ಅಧಿಕಾರಿ ರವರು ಮಾತನಾಡಿ ಈ ಬಗ್ಗೆ ಕ್ರಮವಹಿಸುವಂತೆ ಕಾರ್ಯದರ್ಶಿರವರಿಗೆ ಸೂಚಿಸಿದರು.

➢ ಕೊನೆಯದಾಗಿ ಮಾನ್ಯ ನೋಡಲ್ ಅಧಿಕಾರಿರವರು ಸಭೆಗೆ ಹಾಜರಾದ ಎಲ್ಲಾ ಅಧಿಕಾರಿ/ನೌಕರರಿಗೆ ವಂದನೆಯನ್ನು ತಿಳಿಸುತ್ತಾ ಇನ್ನು ಮುಂದೆಯೂ ಈ ಸಭೆಗಳಲ್ಲಿ ಪೂರ್ವತಯಾರಿಯೊಂದಿಗೆ ಪಾಲ್ಗೊಂಡು ವಾರ್ಡಿನ ಕುಂದುಕೊರತೆಗಳತ್ತ ಗಮನಹರಿಸಿ ವಾರ್ಡ್ ಅಭಿವೃದ್ಧಿ ಪಡಿಸಲು ಸಹಕಾರ ನೀಡಬೇಕೆಂದು ಮನವಿ ಮಾಡಿದರು.

➢ ಸದಸ್ಯ ಕಾರ್ಯದರ್ಶಿ ಹಾಗೂ ಸಹಾಯಕ ಅಭಿಯಂತರರಾದ ಶ್ರೀ ಡಿ.ಎಸ್.ಮಂಜುನಾಥ್ ರವರು ಸಭೆಗೆ ಹಾಜರಾದ ಎಲ್ಲಾ ಅಧಿಕಾರಿಗಳು/ನೌಕರರಿಗೂ ವಂದನೆಯನ್ನು ತಿಳಿಸುವುದರೊಂದಿಗೆ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

**ಸದಸ್ಯ ಕಾರ್ಯದರ್ಶಿ-ವಾರ್ಡ್ 71 ಹಾಗೂ**
**ಸಹಾಯಕ ಅಭಿಯಂತರರು,**

**(ಬಿ.ಆರ್ ರವಿಕುಮಾರ್)**
**ನೋಡಲ್ ಅಧಿಕಾರಿ ವಾರ್ಡ್-71**

ಪ್ರತಿಯನ್ನು:
1) ಮಾನ್ಯ ಶಾಸಕರು, ದಾಸರಹಳ್ಳಿ ವಿಧಾನಸಭಾ ಕ್ಷೇತ್ರರವರ ಆದ್ಯ ಗಮನಕ್ಕೆ ತರಲಾಗಿದೆ.
2) ಜಂಟಿ ಆಯುಕ್ತರು, ದಾಸರಹಳ್ಳಿ ವಲಯ, ಬಿಬಿಎಂಪಿ ರವರ ಅವಗಾಹನೆಗಾಗಿ ಕಳುಹಿಸಿದೆ.
3) ಕಾರ್ಯಪಾಲಕ ಅಭಿಯಂತರರು (ದಾಸರಹಳ್ಳಿ ವಿಭಾಗ) ರವರ ಮಾಹಿತಿಗಾಗಿ ಕಳುಹಿಸಿದೆ.
4) ಸಹಾಯಕ ಕಾರ್ಯಪಾಲಕ ಅಭಿಯಂತರರು (ಹೆಗ್ಗನಹಳ್ಳಿ) ರವರ ಮಾಹಿತಿಗಾಗಿ ಕಳುಹಿಸಿದೆ.

5) ಸಹಾಯಕ ಕಂದಾಯ ಅಧಿಕಾರಿ (ಹೆಗ್ಗನಹಳ್ಳಿ) ರವರ ಮಾಹಿತಿಗಾಗಿ ಕಳುಹಿಸಿದೆ.
6) ಹಿರಿಯ/ಕಿರಿಯ ಆರೋಗ್ಯ ಪರಿವೀಕ್ಷಕರು ವಾರ್ಡ್ ನಂ.71 ರವರ ಮಾಹಿತಿಗಾಗಿ
7) ಸಹಾಯಕ ಅಭಿಯಂತರರು (ವಿದ್ಯುತ್ ಬೆಸ್ಕಾಂ) ರವರ ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ
8) ಸಹಾಯಕ ಅಭಿಯಂತರರು (ವಿದ್ಯುತ್ (ಬೀದಿದೀಪ) ಬಿಬಿಎಂಪಿ ರವರ ಮಾಹಿತಿಗಾಗಿ ಸೂಕ್ತ ಕ್ರಮಕ್ಕಾಗಿ
9) ಕಛೇರಿ ಕಡತಕ್ಕೆ